# ಕರ್ನಾಟಕ ವಿಧಾನ ಪರಿಷತ್ತು

(15ನೇ ವಿಧಾನಪರಿಷತ್ತು, 11ನೇ ಅಧಿವೇಶನ)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 629(840)

ಸದಸ್ಯರ ಹೆಸರು : ಶ್ರೀ ಆಯನೂರ್ ಮಂಜುನಾಥ್

ಉತ್ತರಿಸುವ ದಿನಾಂಕ : 20.12.2021

ಉತ್ತರಿಸುವವರು : ಅರಣ್ಯ, ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| 1 | ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕು ಮಂಡಗದ್ದೆ ಹೋಬಳಿಯಲ್ಲಿರುವ ತುಂಗಭದ್ರ ಹಿನ್ನೀರಿನ ಪಕ್ಷಿಧಾಮ ನಶಿಸಿ ಹೋಗುತ್ತಿರುವುದು ಹಾಗೂ ಪಕ್ಷಿಧಾಮವನ್ನು ಅಧಿಸೂಚಿಸುವ ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ವಿವರ ನೀಡುವುದು) | ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲ್ಲೂಕು, ಮಂಡಗದ್ದೆ ಹೋಬಳಿಯಲ್ಲಿರುವ ತುಂಗಭದ್ರ ಹಿನ್ನೀರಿನ ಒಟ್ಟು 58 ಹೆಕ್ಟೇರ್ ಪ್ರದೇಶವನ್ನು ವನ್ಯಜೀವಿ (ಸಂರಕ್ಷಣಾ) ಕಾಯ್ದೆ, 1972ರ ಪ್ರಕಾರ ಸಮುದಾಯ ಮೀಸಲು / ಸಂರಕ್ಷಣಾ ಮೀಸಲು ಪ್ರದೇಶವೆಂದು ಘೋಷಿಸುವ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿದ್ದು, ಪ್ರಸ್ತಾಪಿತ ಪ್ರದೇಶವು ಸಂರಕ್ಷಣಾ ಮೀಸಲು ಪ್ರದೇಶವೆಂದು ಘೋಷಿಸಲು ಸೂಕ್ತವೆಂದು ಕಂಡುಬಂದಲ್ಲಿ, ರಾಜ್ಯ ವನ್ಯಜೀವಿ ಮಂಡಳಿಯ ಅನುಮೋದನೆಗಾಗಿ ಸಲ್ಲಿಸಲಾಗುವುದು. |
| 2 | ಬಂದಿದ್ದಲ್ಲಿ ಅರಣ್ಯ ಇಲಾಖೆಯಿಂದ ಅಧಿಸೂಚನೆ ಹೊರಡಿಸಿ, ಇದನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸುವುದು ಸರ್ಕಾರದ ಗಮನದಲ್ಲಿದೆಯೇ; | |
| 3 | ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅಧಿಕೃತವಾಗಿ ಪಕ್ಷಿಧಾಮವನ್ನಾಗಿ ಅಧಿಸೂಚನೆ ಹೊರಡಿಸಿ ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರಿಸಲು ಕ್ರಮ ಕೈಗೊಳ್ಳಲಾಗುವುದು? (ಸಂಪೂರ್ಣ ವಿವರ ನೀಡುವುದು) | |

ಸಂಖ್ಯೆ: ಅಪಜೀ 237 ಎಫ್‌ಡಬ್ಲ್ಯೂಎಲ್ 2021

(ಉಮೇಶ್ ವಿ ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು.